**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 490/2023**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,

ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರು:** **ಸ್ವಾಮಿ** ಬಿನ್ ಜಾನೇಗೌಡ ಉಃ ರಾಜಣ್ಣ,

**ದೋಷಾರೋಪಣೆ**

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕಃ 07.01.2023 ರಂದು ಬೆಳಗಿನ ಜಾವ ಸುಮಾರು 01.30 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಚನ್ನರಾಯಪಟ್ಟಣ ಮಕಾನ್ ವೃತ್ತದ ಸಮೀಪದ ಶ್ರಣಬೆಳಗೊಳ ಕಡೆಗೆ ಹೋಗುವ ರಸ್ತೆಯಲ್ಲಿ ಸಾಕ್ಷಿ.2,3,4 ಮತ್ತು 5 ರವರು ಆರೋಪಿಯಾದ ನೀವು ಚಲಾಯಿಸುತ್ತಿದ್ದ ಕಎ.41.ಸಿ.8809 ನಂಬರಿನ ಐಚರ್ ವಾಹವನ್ನು ತಡೆದು ನಿಲ್ಲಿಸಿ ದಾಳಿ ಮಾಡಿ ನೋಡಿದಾಗ, ನೀವು ಸದರಿ ವಾಹನದಲ್ಲಿ ಯಾವುದೇ ಪರವಾನಗಿ ಇಲ್ಲದೆ 11 ಎಮ್ಮೆಗಳನ್ನು ಖಾಸಯಿಖಾನೆಗೆ ಅಕ್ರಮವಾಗಿ ಸಾಗಿಸುವ ಉದ್ದೇಶದಿಂದ ಎಮ್ಮೆಗಳಿಗೆ ಹಿಂಸೆಯಾಗುವ ರೀತಿಯಲ್ಲಿ ಎಮ್ಮೆಗಳನ್ನು ತುಂಬಿಕೊಂಡು ಹೋಗಿ, ಆ ಮೂಲಕ ಆರೋಪಿತರಾದ ನೀವುದ **ಕರ್ನಾಟಕ ಫ್ರಿವೆನ್ಷನ್ ಆಫ್ ಸ್ಲಾಟರ್ ಅಂಡ್ ಫ್ರಿಸರ್ವೇಷನ್ ಆಫ್ ಕ್ಯಾಟಲ್ ಆರ್ಡಿನನ್ಸ್ 2020 ರ ಕಲಂಃ 4 ಸಹವಾಚಕ 12** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ ?

ಆರೋಪಿಯ ಉತ್ತರಃ

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಆರೋಪಿಯ ಉತ್ತರಃ

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **25.07.2025**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.